# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 659 |
| ಸದಸ್ಯರ ಹೆಸರು | : | ಶ್ರೀ ಮಧು ಜಿ ಮಾದೇಗೌಡ (ಪದವೀಧರರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 09.03.2026 |
| ಉತ್ತರಿಸುವ ಸಚಿವರು | : | ಮಾನ್ಯ ಶಾಲಾ ಶಿಕ್ಷಣ ಸಾಕ್ಷರತಾ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಮಧ್ಯಾಹ್ನ ಬಿಸಿಯೂಟ ಯೋಜನೆಯನ್ನು ಮುಂದಿನ ಶೈಕ್ಷಣಿಕ ವರ್ಷದಿಂದ ಸರ್ಕಾರಿ ಮತ್ತು ಅನುದಾನಿತ ಪೂರ್ವ ಪ್ರಾಥಮಿಕ ಮತ್ತು ಪದವಿ ಪೂರ್ವ (ಪಿ.ಯು.ಪಿ) ವಿದ್ಯಾರ್ಥಿಗಳಿಗೂ ವಿಸ್ತರಿಸಲು ಸರ್ಕಾರ ಉದ್ದೇಶಿಸಿದೆಯೇ; | ಸರ್ಕಾರಿ ಶಾಲೆಗಳಲ್ಲಿ ಪ್ರಾರಂಭಿಸಲಾಗಿರುವ ಪೂರ್ವ ಪ್ರಾಥಮಿಕ ತರಗತಿಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ 2025-26ನೇ ಸಾಲಿನಲ್ಲಿ ಮಧ್ಯಾಹ್ನದ ಬಿಸಿಯೂಟ ಯೋಜನೆಯನ್ನು ವಿಸ್ತರಿಸಲಾಗಿದೆ.<br><br>ಮುಂದಿನ ಶೈಕ್ಷಣಿಕ ವರ್ಷದಿಂದ ಅನುದಾನಿತ ಪೂರ್ವ ಪ್ರಾಥಮಿಕ ಮತ್ತು ಪದವಿ ಪೂರ್ವ (ಪಿ.ಯು.ಸಿ) ವಿದ್ಯಾರ್ಥಿಗಳಿಗೂ ಮಧ್ಯಾಹ್ನದ ಬಿಸಿಯೂಟ ಯೋಜನೆಯನ್ನು ವಿಸ್ತರಿಸುವ ಯಾವುದೇ ಪ್ರಸ್ತಾವನೆ ಸರ್ಕಾರದ ಹಂತದಲ್ಲಿ ಇರುವುದಿಲ್ಲ. |
| ಆ) | ಇದ್ದಲ್ಲಿ ಈ ಯೋಜನೆ ಬೇಕಾಗಬಹುದಾದ ಹೆಚ್ಚುವರಿ ಅನುದಾನ ಎಷ್ಟು; ಒಟ್ಟಾರೆ ಮಧ್ಯಾಹ್ನದ ಬಿಸಿಯೂಟ ಯೋಜನೆಗೆ ವಾರ್ಷಿಕವಾಗಿ ಭರಿಸಬೇಕಾಗಬಹುದಾದ ಅಂದಾಜು ವೆಚ್ಚ ಎಷ್ಟು; (ವಿವರ ನೀಡುವುದು) | ಪ್ರಶ್ನೆ ಉದ್ಭವಿಸುವುದಿಲ್ಲ.<br><br>2025-26ನೇ ಸಾಲಿನಲ್ಲಿ ಪೂರ್ವ ಪ್ರಾಥಮಿಕ ತರಗತಿಯಿಂದ 10ನೇ ತರಗತಿಯವರೆಗೆ ಮಧ್ಯಾಹ್ನದ ಬಿಸಿಯೂಟ ಮತ್ತು ಕ್ಷೀರಭಾಗ್ಯ ಯೋಜನೆಗೆ ಒಟ್ಟಾರೆಯಾಗಿ ರೂ. 2534.38 ಕೋಟಿಗಳ ಅನುದಾನವನ್ನು ಆಯವ್ಯಯದಲ್ಲಿ ನಿಗದಿಪಡಿಸಲಾಗಿದೆ. |
| ಇ) | ಪೂರ್ವ ಪ್ರಾಥಮಿಕ ಮತ್ತು ಪಿಯುಸಿ ವಿದ್ಯಾರ್ಥಿಗಳಿಗೆ ಮಧ್ಯಾಹ್ನದ ಬಿಸಿಯೂಟ ಯೋಜನೆಯನ್ನು ವಿಸ್ತರಿಸುತ್ತಿರುವುದರಿಂದ ಹೆಚ್ಚುವರಿಯಾಗಿ ಎಷ್ಟು ಸಂಖ್ಯೆಯ ವಿದ್ಯಾರ್ಥಿಗಳಿಗೆ ಇದರ ಲಾಭ ಸಿಗಲಿದೆ; (ವಿವರ ನೀಡುವುದು) | 2025-26ನೇ ಸಾಲಿನ ಪ್ರಧಾನ ಮಂತ್ರಿ ಪೋಷಣ ಶಕ್ತಿ ನಿರ್ಮಾಣ ಯೋಜನೆಯ ವಾರ್ಷಿಕ ಕ್ರಿಯಾ ಯೋಜನೆಗೆ ಅನುಮೋದನೆ ನೀಡಲಾಗಿರುವ ಯೋಜನಾ ಅನುಮೋದನಾ ಮಂಡಳಿ(PAB)ಯ ಸಭಾ ನಡವಳಿಯಲ್ಲಿ ಪೂರ್ವ ಪ್ರಾಥಮಿಕ ತರಗತಿಗಳಲ್ಲಿನ 1,98,270 ಮಕ್ಕಳಿಗೆ ಮಧ್ಯಾಹ್ನದ ಬಿಸಿಯೂಟ ನೀಡಲು ಅನುಮೋದನೆ ನೀಡಲಾಗಿದೆ.<br><br>ಮಧ್ಯಾಹ್ನದ ಬಿಸಿಯೂಟ ಯೋಜನೆಯನ್ನು ಸರ್ಕಾರಿ ಪದವಿ ಪೂರ್ವ ತರಗತಿಗಳಿಗೆ ವಿಸ್ತರಿಸಿದರೆ 2,77,461 |

| | | |
|---|---|---|
| | | ವಿದ್ಯಾರ್ಥಿಗಳು ಸದರಿ ಯೋಜನೆಯ ಉಪಯೋಗವನ್ನು ಪಡೆಯಬಹುದಾಗಿದೆ. |
| ಈ) | ಯೋಜನೆಯನ್ನು ವಿಸ್ತರಿಸುತ್ತಿರುವುದರಿಂದ ಬಿಸಿಯೂಟ ತಯಾರಿಕೆಗೆ ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳಲಾಗುವುದೇ; (ವಿವರ ನೀಡುವುದು) | ಸರ್ಕಾರಿ ಶಾಲೆಗಳಲ್ಲಿ ಪ್ರಾರಂಭಿಸಲಾಗಿರುವ ಪೂರ್ವ ಪ್ರಾಥಮಿಕ ತರಗತಿಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ 2025-26ನೇ ಸಾಲಿನಲ್ಲಿ ಮಧ್ಯಾಹ್ನದ ಬಿಸಿಯೂಟ ಯೋಜನೆಯನ್ನು ವಿಸ್ತರಿಸಿರುವುದರಿಂದ ಶಾಲೆಯಲ್ಲಿನ ಎಲ್ಲಾ ತರಗತಿಗಳ ಒಟ್ಟಾರೆ ವಿದ್ಯಾರ್ಥಿಗಳ ದಾಖಲಾತಿಯನ್ನು ಪರಿಗಣಿಸಿ ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ಹೆಚ್ಚುವರಿಯಾಗಿ ಸಹಾಯಕ ಅಡುಗೆ ಸಿಬ್ಬಂದಿಗಳನ್ನು ನೇಮಕಾತಿ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. |
| ಉ) | ಸರ್ಕಾರದ ವತಿಯಿಂದ ಬಿಸಿಯೂಟದ ಜೊತೆಗೆ ಉಚಿತವಾಗಿ ನೀಡುವ ಇನ್ನಿತರೆ ಸೌಲಭ್ಯಗಳೇನು; ಇದಕ್ಕಾಗಿ ವಾರ್ಷಿಕವಾಗಿ ಭರಿಸಲಾಗುತ್ತಿರುವ ವೆಚ್ಚ ಎಷ್ಟು ? (ವಿವರ ನೀಡುವುದು) | ಸರ್ಕಾರದ ವತಿಯಿಂದ ಮಧ್ಯಾಹ್ನ ಬಿಸಿಯೂಟದೊಂದಿಗೆ ಪೂರಕ ಪೌಷ್ಟಿಕ ಆಹಾರದ ರೂಪದಲ್ಲಿ ಮೊಟ್ಟೆ/ಮೊಟ್ಟೆ ಸೇವಿಸದ ವಿದ್ಯಾರ್ಥಿಗಳಿಗೆ ಬಾಳೆಹಣ್ಣನ್ನು ವಾರದಲ್ಲಿ 06 ದಿನಗಳಿಗೆ ಅಜೀಂ ಪ್ರೇಮ್ ಫೌಂಡೇಷನ್ ಸಂಸ್ಥೆಯ ಸಹಯೋಗದೊಂದಿಗೆ ನೀಡಲಾಗುತ್ತಿದೆ.<br><br>ರಾಜ್ಯ ಸರ್ಕಾರದಿಂದ 2 ದಿನಗಳಿಗೆ ಸಂಬಂಧಿಸಿದ ಪೂರಕ ಪೌಷ್ಟಿಕ ಆಹಾರದ ವಿತರಣೆಯ ವೆಚ್ಚವನ್ನು ಭರಿಸಲಾಗುತ್ತಿದ್ದು, ಉಳಿದ 4 ದಿನಗಳ ವೆಚ್ಚವನ್ನು ಅಜೀಂ ಪ್ರೇಮ್‌ಜಿ ಫೌಂಡೇಷನ್, ಬೆಂಗಳೂರು ಈ ಸಂಸ್ಥೆಯಿಂದ ಭರಿಸಲಾಗುತ್ತಿದೆ.<br><br>2025-26ನೇ ಸಾಲಿನಲ್ಲಿ ರಾಜ್ಯ ಸರ್ಕಾರದಿಂದ ಅಂದಾಜು ರೂ.203.33 ಕೋಟಿಗಳನ್ನು ಭರಿಸಲಾಗುತ್ತಿದೆ. ಅಜೀಂ ಪ್ರೇಮ್‌ಜಿ ಫೌಂಡೇಷನ್, ಬೆಂಗಳೂರು ಈ ಸಂಸ್ಥೆಯಿಂದ ಅಂದಾಜು ರೂ.381.00 ಕೋಟಿಗಳ ವೆಚ್ಚ ಭರಿಸಲಾಗುತ್ತಿದೆ. |

ಇಪಿ 16 ಎಂಎಂಎಸ್ 2026

**(ಎಸ್.ಮಧು ಬಂಗಾರಪ್ಪ)**
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು.**